## ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ

## ಮಾಧ್ಯಮ ಹಬ್ಬ-2026 - ವಿಶೇಷ ಕಾರ್ಯಾಗಾರ




ಪತ್ರಿಕೋದ್ಯಮ ಕ್ಷೇತ್ರದಲ್ಲಿ ಯಶಸ್ವಿಯಾಗಲು ಅಧ್ಯಯನ ಪ್ರವೃತ್ತಿ ಬೆಳೆಸಿಕೊಳ್ಳಬೇಕು : ಕೆ.ವಿ. ಪ್ರಭಾಕರ್

ಅತಿವೇಗವಾಗಿ ಬೆಳೆಯುತ್ತಿರುವ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಯಶಸ್ಸನ್ನು ಕಾಣಲು ವಿದ್ಯಾರ್ಥಿಗಳು ಓದು ಮತ್ತು ಅಧ್ಯಯನ ಪ್ರವೃತ್ತಿ ಬೆಳೆಸಿಕೊಳ್ಳಬೇಕೆಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ವಿದ್ಯಾರ್ಥಿಗಳಿಗೆ ಸಲಹಯಿತ್ತರು.

ಮಾಧ್ಯಮ ಕ್ಷೇತ್ರದ ವಿವಿಧ ಆಯಾಮಗಳಲ್ಲಿ ಕೌಶಲ್ಯ ರೂಪಿಸಿಕೊಳ್ಳಲು ಪತ್ರಿಕೋದ್ಯಮ ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ನೆರವಾಗುವ ಉದ್ದೇಶದಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೆಂಗಳೂರು ನಗರ ಜಿಲ್ಲೆ, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯ, ಜ್ಞಾನಭಾರತಿ, ಸಹಭಾಗಿತ್ವದಲ್ಲಿ ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಅಕಾಡೆಮಿಕ್ ಬ್ಲಾಕ್ ಡಬ್ಲ್ಯೂ.ಬಿ.ಸಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ "ಮಾಧ್ಯಮ ಹಬ್ಬ- 2026" ಎರಡು ದಿನಗಳ ವಿಶೇಷ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾಧ್ಯಮಗಳ ವಿವಿಧ ಆಯಾಮಗಳ ಕೌಶಲ್ಯಗಳನ್ನು ಕಲಿಯಲು ಈ ಕಾರ್ಯಗಾರ ಸಹಕಾರಿಯಾಗಲಿದ್ದು ಪತ್ರಿಕೋದ್ಯಮ ವಿದ್ಯಾರ್ಥಿಗಳು ಸ್ವತಂತ್ರ ವ್ಯಕ್ತಿತ್ವ ಸಂಘಟನಾ ಮನೋಭಾವ ಅಳವಡಿಸಿಕೊಳ್ಳಬೇಕು, ಜನಸಾಮಾನ್ಯರ ದುಃಖ- ದುಮ್ಮಾನಗಳನ್ನು ಅಲಿಸಿ ನೈಜ ಮತ್ತು ನಿಖರ

ಸುದ್ದಿಗಳನ್ನು ನೀಡಿ ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ನಿರ್ವಹಿಸಲು ಪ್ರಯತ್ನಿಸಿ ಎಂದು ಅವರು ವಿದ್ಯಾರ್ಥಿಗಳಿಗೆ ಸೂಚಿಸಿದರು.

ಹಿರಿಯ ಪತ್ರಕರ್ತರು ಹಾಗೂ ಚಿಂತಕರಾದ ದಿನೇಶ್ ಅಮೀನ್ ಮಟ್ಟು ಅವರು ಮಾಧ್ಯಮ ತತ್ವಗಳ ಕುರಿತು ಮಾತನಾಡುತ್ತಾ ಪತ್ರಿಕೋದ್ಯಮ ವಿದ್ಯಾರ್ಥಿಗಳು ಓದಿನ ಹಸಿವನ್ನು ಬೆಳೆಸಿಕೊಂಡು ಸುದ್ದಿಯನ್ನು ಮಾಡುವಾಗ ಸಾಮಾಜಿಕ ಜವಾಬ್ದಾರಿಯನ್ನು ಮೆರೆಯಬೇಕು ಎಂದು ವಿವರಿಸಿದರು.

ಪತ್ರಕರ್ತರಾದವರು ಪತ್ರಿಕೋದ್ಯಮದ ನೈತಿಕ ತತ್ವ ಮತ್ತು ಸಿದ್ಧಾಂತಗಳನ್ನು ತಮ್ಮ ಬರವಣಿಗೆಯಲ್ಲಿ ಅಳವಡಿಸಿಕೊಳ್ಳಬೇಕು, ಪತ್ರಿಕೋದ್ಯಮದಲ್ಲಿ ನಂಬಿಕೆಗೆ ದ್ರೋಹಕ್ಕೆ ಎಡೆಮಾಡಿಕೊಡದೆ ನೈಜ ಸುದ್ದಿಯನ್ನು ಜನರಿಗೆ ತಲುಪಿಸುವಂತಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಈ ಕಾರ್ಯಗಾರದಲ್ಲಿ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ. ಪಲ್ಲವಿ , ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ.ರಮೇಶ್.ಬಿ, ,ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಆಯೇಷಾ ಖಾನಂ, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಅಧ್ಯಕ್ಷರಾದ ಡಾ.ತಾಂಡವ ಗೌಡ ಟಿ.ಎನ್. ಬೆಂಗಳೂರು ವಿಶ್ವವಿದ್ಯಾಲಯದ (ಜ್ಞಾನಭಾರತಿ) ಎಲೆಕ್ಟ್ರಾನಿಕ್ ಮೀಡಿಯಾ ವಿಭಾಗದ ಸಂಯೋಜಕರಾದ ಪ್ರೊ. ವಾಹಿನಿ ಅರವಿಂದ್, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಸಚಿವರಾದ ನವೀನ್ ಜೋಸೆಫ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶಿವಾನಂದ ತಗಡೂರು, ಬೆಂಗಳೂರು ವಿಶ್ವವಿದ್ಯಾಲಯದ ಸಂವಹನ ವಿಭಾಗದ ಮುಖ್ಯಸ್ಥರಾದ ಪ್ರೊ. ಬಿ. ಶೈಲಶ್ರೀ, ಬೆಂಗಳೂರು ನಗರ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕರಾದ ಪಲ್ಲವಿ ಹೊನ್ನಾಪುರ ಹಾಗೂ ಪತ್ರಿಕೋದ್ಯಮದ 100ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಬೆಂಗಳೂರು ವಿಶ್ವವಿದ್ಯಾನಿಲಯ, ಜ್ಞಾನಭಾರತಿ ಸಹಭಾಗಿತ್ವದಲ್ಲಿ


ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ


ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಬೆಂಗಳೂರು ವಿಶ್ವವಿದ್ಯಾನಿಲಯ, ಜ್ಞಾನಭಾರತಿ ಸಹಭಾಗಿತ್ವದಲ್ಲಿ
NEWS




ಡಾ.ಮನಮೋಹನ್ ಸಿಂಗ್


2026
NEWS


ಡಾ.ಮನಮೋಹನ್


ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಬೆಂಗಳೂರು ವಿಶ್ವವಿದ್ಯಾನಿಲಯ, ಜ್ಞಾನಭಾರತಿ ಸಹಭಾಗಿತ್ವದಲ್ಲಿ
ಮಾಧ್ಯಮ ಹಬ್ಬ - 2026
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಬೆಂಗಳೂರು ವಿಶ್ವವಿದ್ಯಾನಿಲಯ, ಜ್ಞಾನಭಾರತಿ ಸಹಭಾಗಿತ್ವದಲ್ಲಿ
ಮಾಧ್ಯಮ ಹಬ್ಬ - 2026




ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಬೆಂಗಳೂರು ವಿಶ್ವವಿದ್ಯಾನಿಲಯ, ಜ್ಞಾನಭಾರತಿ ಸಹಭಾಗಿತ್ವದಲ್ಲಿ
ಮಾಧ್ಯಮ ಹಬ್ಬ - 2026
NEWS
rafting Cont
hat Mat